

ಅರುಣ ಪಿ. ಭಟ್ಟ

## ವಾರಭವಿಷ್ಯ 20.02.2020ರಿಂದ 26.02.2020ರ ವರೆಗೆ




ಮಕ್ಕಳ ಬಗ್ಗೆ ನಿಮ್ಮ ಗಮನ ಹಾಗೂ ಅವರ ಪರಿಸರವನ್ನು ನೀವು ಉತ್ತಮವಾಗಿಟ್ಟುಕೊಳ್ಳುವ ಮನ ಸ್ಥಿತಿಯನ್ನು ರೂಪಿಸುವುದು ಒಳ್ಳೆಯದು. ಶ್ರಮದ ಕೆಲಸಗಳಿಂದ ಸಾರ್ಥಕತೆ. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ ಹೆಚ್ಚುವ ಸಾಧ್ಯತೆ ಇದೆ.

ಶುಭದಿನ 20. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಕೆಲಸದಲ್ಲಿ ಉತ್ತಮ ಫಲಿತಾಂಶ. ಇನ್ನೊಬ್ಬರಿಗೆ ಬುದ್ಧಿವಾದ ಹೇಳುವ ಮೊದಲು ವ್ಯಕ್ತಿ ಕೇಳುಗನಾಗಿದ್ದಾನೆಯೇ ಎಂಬುದನ್ನು ಅರಿತುಕೊಳ್ಳಿ. ವಾರವಿಡೀ ನಿಮ್ಮ ಮೇಲಧಿಕಾರಿಗಳ ಇಲ್ಲವೆ ಮನೆಯ ಹಿರಿಯರ ಒಲುಮೆ ಗಳಿಸಿಕೊಳ್ಳುವಿರಿ.

ಶುಭದಿನ 22. ಆದಿತ್ಯ ಹೃದಯ ಪಠಿಸಿರಿ.




ನಿಮ್ಮಲ್ಲಿನ ಜಡತ್ವ ಕರಗಿ ಹೋಗಲಿದೆ. ನಿಮ್ಮ ಸ್ವಭಾವದಿಂದ ಹೆಚ್ಚಿನ ಹೆಸರು ಸಂಪಾದನೆ ಮಾಡಲಿದ್ದೀರಿ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಮಕ್ಕಳ ಕೆಲವು ವರ್ತನೆಗಳು ನಿಮ್ಮ ಮನದಲ್ಲಿ ಬೇಸರ ತರಿಸಲಿದೆ.

ಶುಭದಿನ 24. ಸೌಂದರ್ಯ ಲಹರಿ ಪಠಿಸಿರಿ.




ಕೆಲಸದಲ್ಲಿ ಅನಗತ್ಯವಾಗಿ ತೊಂದರೆ ಬರಬಹುದಾಗಿದೆ. ಕೆಲವು ಕಾರ್ಯಗಳನ್ನು ನೀವೇ ಸ್ವತಃ ನಿಂತು ಮಾಡುವುದು ಒಳಿತು. ಸಾಲ ವಸೂಲಾತಿಯಲ್ಲಿ ನಿಮ್ಮ ನಿರೀಕ್ಷೆಯಲ್ಲಿ ಹುಸಿಯಾಗಲಿದೆ. ಬರುವಂತ ಆರ್ಥಿಕ ಮೂಲಗಳು ತಡೆಯಾಗುವ ಸಾಧ್ಯತೆಯಿದೆ.

ಶುಭದಿನ 21. ಕಾಲಭೈರವನ ಆರಾಧನೆ ಮಾಡಿರಿ.




ವಿವೇಚನಾರಹಿತ ಹೂಡಿಕೆಗಳಿಂದ ಧನ ನಷ್ಟ. ನಿಮ್ಮದೇ ವಿಚಾರಗಳು ನಡೆಯಬೇಕೆಂಬ ವಾದವು ಅತಿಶಯೋಕ್ತಿಯಾಗಿ ಕಾಣಬಹುದು. ಮಾತಿಗೆ ಪ್ರಾಧಾನ್ಯತೆ ನೀಡಿ ಮುನ್ನಡೆಯಿರಿ. ಹೊಸ ಕೌಶಲವನ್ನು ಕಲಿಯಲು ಪ್ರಯತ್ನಿಸುತ್ತೀರಿ.

ಶುಭದಿನ 25. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ




ಮನಸ್ಸು ಮರ್ಕಟವಿದ್ದಂತೆ ನಿಮ್ಮ ಮನೋಕಾಮನೆಗಳನ್ನು ಆದಷ್ಟು ನಿಯಂತ್ರಣ ಮಾಡುವುದು ಒಳ್ಳೆಯದು. ಒಂದು ದೊಡ್ಡದಾದ ಯೋಜನೆಯೊಂದು ನಿಮ್ಮ ಬುದ್ಧಿ ಕೌಶಲ್ಯಕ್ಕೆ ಎದುರಾಗುವುದು.

ಶುಭದಿನ 25. ಹನುಮಾನ್ ಚಾಲಿಸ್ ಪಠಿಸಿರಿ.




ಕೆಲಸದಲ್ಲಿ ಹೆಚ್ಚಿನ ವಿಳಂಬದಿಂದ ನಿಮ್ಮ ಬಗ್ಗೆ ಹಲವರು ಹಲವಾರು ಮಾತುಗಳನ್ನಾಡುವರು. ಕೆಲ ವಿಚಾರಗಳಲ್ಲಿ ಅತಿಯಾದ ಆಸಕ್ತಿ ತೋರಿಸುವುದು ಒಳ್ಳೆಯದಲ್ಲ. ಯೋಜನೆಗಳ ವಿಸ್ತರಣೆಗೆ ಅವಕಾಶಗಳು ಸಿಗುವ ಸಾಧ್ಯತೆ.

ಶುಭದಿನ 26. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಆರ್ಥಿಕವಾಗಿ ಬೆಳವಣಿಗೆ ಸಾಧಿಸುವಿರಿ. ರಾಜಿ ಪಂಚಾಯಿತಿಗೆ ಹೋಗದಿರುವುದು ಸೂಕ್ತ. ಸುಖಾಸುಮ್ಮನೆ ಕದನಕ್ಕೆ ಬರುವಂತಹ ಜನಗಳು ಕಂಡುಬರುತ್ತಾರೆ, ಆದಷ್ಟು ದೂರದಲ್ಲಿ ನಿಲ್ಲಿ. ಸಂಗಾತಿಯ ಜತೆಗೆ ಮಹತ್ವದ ಚರ್ಚೆ ಮಾಡಲಿದ್ದೀರಿ.

ಶುಭದಿನ 23. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.




ನಿಮ್ಮ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳುತ್ತೀರಿ. ಆ ಮೂಲಕ ಹಲವು ಕಾರ್ಯಗಳನ್ನು ಪೂರ್ಣಗೊಳಿಸುತ್ತೀರಿ. ನಿಮ್ಮ ಸಾಮಾಜಿಕ ಸ್ಥಾನಮಾನದಲ್ಲಿ ಏರಿಕೆ ಆಗಲಿದೆ. ವಾರದ ಅಂತ್ಯಕ್ಕೆ ಸರಿಯುತ್ತಾ ದೈಹಿಕ ನೋವುಗಳು ಕಾಡುತ್ತವೆ.

ಶುಭದಿನ 22. ಚಂಡಿ ಪಾರಾಯಣ ಮಾಡಿರಿ.




ಹೊಸ ಯೋಜನೆಗೆ ಸಿದ್ಧತೆ ನಡೆಸುವುದು ಒಳ್ಳೆಯದು. ಪಶುಸಂಗೋಪನೆ, ಕೃಷಿಯಲ್ಲಿ ಆಸಕ್ತಿ. ಆರ್ಥಿಕ ಸಹಕಾರಕ್ಕಾಗಿ ಆತ್ಮೀಯರ ಬಳಿ ಕೇಳುವ ಸಾಧ್ಯತೆ ಇದೆ. ಮಕ್ಕಳ ಪಠ್ಯೇತರ ಆಸಕ್ತಿಯನ್ನು ಗುರುತಿಸಿ, ನೆರವನ್ನು ನೀಡುತ್ತೀರಿ.

ಶುಭದಿನ 23. ಮಾರುತಿ ಉಪಾಸನೆ ಪೂಜೆ ಮಾಡಿರಿ.




ಈ ವಾರ ಸೋಲಿನಿಂದ ಗೆಲುವಿನ ಕಡೆಗೆ ಪ್ರಯಾಣ ಬೆಳೆಸುವಿರಿ. ಸಂತೋಷದ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ. ಕುಟುಂಬದಲ್ಲಿ ಅನಿರೀಕ್ಷಿತವಾಗಿ ಸಂಕಷ್ಟ ಎದುರಾಗಬಹುದು. ದೃಢಮನಸ್ಸಿನಿಂದ ಕಾರ್ಯಗಳಲ್ಲಿ ಸಫಲರಾಗುವಿರಿ.

ಶುಭದಿನ 25. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿದೆ. ಉದ್ಯೋಗದ ಸ್ಥಿತಿಗತಿಗಳು ಚೇತರಿಕೆಯತ್ತ ಸಾಗುತ್ತವೆ. ನಿಮ್ಮ ಕ್ರಿಯಾಶೀಲತೆಯಿಂದ ಹೊಸತಾದ ಕಲ್ಪನೆಗಳೊಂದಿಗೆ ಸಾಗುವಿರಿ. ಉದ್ಯೋಗದಲ್ಲಿ ಪ್ರಗತಿ ಸಾಧ್ಯತೆ ಇದೆ.

ಶುಭದಿನ 26. ವಿಷ್ಣು ಸಹಸ್ರನಾಮ ಮಾಡಿರಿ.

DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ
ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ

